ಮೇ ೨೦೨೦

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

## ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ ಏಪ್ರಿಲ್ – ಮೇ 2020 ಮಾಹೆಗಳಲ್ಲಿ ಕೈಗೊಳ್ಳಲಾದ ವಿವಿಧ ತರಬೇತಿ ಮತ್ತು ಪ್ರಗತಿ ಪರಿಶೀಲನಾ ಕಾರ್ಯಕ್ರಮಗಳು.

### ಕೋವಿಡ್ - ೧೯ ತರಬೇತಿ

ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಮಂತ್ರಾಲಯ ಭಾರತ ಸರ್ಕಾರದ ಸಲಹೆಯಂತೆ ಕೊರೊನಾ-೧೯ನ ಸಂದರ್ಭದಲ್ಲಿ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಗಳ ಅನುಷ್ಠಾನ ಸಂದರ್ಭದಲ್ಲಿ ಅನುಸರಿಸಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ANM ಸ್ವಯಂ ಸೇವಕರು ಮತ್ತು ಎಸ್.ಬಿ.ಎಂ ಸಮಾಲೋಚಕರು ಸೇರಿದಂತೆ ಎಲ್ಲಾ ಹಂತದ ಭಾಗೀದಾರರಿಗೆ ಜ಼ೂಮ್ ವಿಡಿಯೋ ಕಾನ್ಫರೆನ್ಸ್ ಮೂಲಕ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.





ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಾಗೂ ಯುನಿಸೆಫ್ ಸಂಸ್ಥೆಯ ಪರಿಣಿತ ಸಂಪನ್ಮೂಲ ವ್ಯಕ್ತಿಗಳು ಸದರಿ ತರಬೇತಿ ಕಾರ್ಯಕ್ರಮದಲ್ಲಿ ವಿಷಯ ಮಂಡನೆ ಮಾಡಿದರು, ರಾಜ್ಯದ ಎಲ್ಲಾ 6021 ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು 13 ಬ್ಯಾಚ್‌ಗಳಲ್ಲಿ ಈ ಆನ್ಲೈನ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿತ್ತು. ಸುಮಾರು ೩೦,೦೦೦ಕ್ಕೂ ಅಧಿಕ ಜನರು ಭಾಗವಹಿಸಿ, ಈ ತರಬೇತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕೊರೊನಾ-೧೯ ವೈರಸ್ ಸಾಂಕ್ರಾಮಿಕವಾಗಿ ಹರಡುತ್ತಿರುವ ಈ ಸಂದರ್ಭದಲ್ಲಿ ಗ್ರಾಮಗಳಲ್ಲಿ ಸಮುದಾಯ ಮತ್ತು ಕುಟುಂಬಗಳು ಪಾಲಿಸಬೇಕಾದ ನೈರ್ಮಲ್ಯ ಅಭ್ಯಾಸಗಳಾದ ಕೈತೊಳೆಯುವುದು, ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು, ವೈಯಕ್ತಿಕ ಸ್ವಚ್ಛತೆ ಮತ್ತು ಸ್ಯಾನಿಟೈಜರ್ ಸೇರಿ ಹಲವು ಸುರಕ್ಷತಾ ವಿಧಾನಗಳನ್ನು ಅಳವಡಿಸಿಕೊಂಡು ಗ್ರಾಮೀಣ ಸಮುದಾಯಕ್ಕೆ ಯೋಜನೆಯ ಕಾರ್ಯಗಳನ್ನು ನಿರ್ವಹಿಸುವ ಕುರಿತು ವಿಷಯ ಮಂಡನೆ ಮೂಲಕ ಮಾಹಿತಿ ನೀಡಲಾಯಿತು.

### ಪ್ರಗತಿ ಪರಿಶೀಲನೆ

ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ ಯೋಜನೆಯಡಿ ಘನ ತ್ಯಾಜ್ಯ ನಿರ್ವಹಣೆ, ಸಮುದಾಯ ಶೌಚಾಲಯ ನಿರ್ಮಾಣ, ವೈಯಕ್ತಿಕ ಗೃಹ ಶೌಚಾಲಯ ನಿರ್ಮಾಣ (LOB, NLB) ಹಾಗೂ ವಿವಿಧ ಘಟಕಾಂಶಗಳಲ್ಲಿ ಆಗಿರುವ ಪ್ರಗತಿ ಕುರಿತು ಮಾನ್ಯ ಆಯುಕ್ತರು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಎಸ್.ಬಿ.ಎಂ ನೋಡಲ್ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ಮೂಲಕ ಪ್ರಗತಿ ಪರಿಶೀಲನೆ ನಡೆಸಿದರು.





ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಕ್ರಮಗಳ ಕುರಿತು ಗ್ರಾಮೀಣ ಜನರಿಗೆ ಮಾಹಿತಿ ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ಇಲಾಖೆಯಲ್ಲಿ ವಿವಿಧ 10 ಸಮುದಾಯ ರೇಡಿಯೋ ಕೇಂದ್ರಗಳನ್ನು ಎಂಪ್ಯಾನಲ್ ಮಾಡಿಕೊಳ್ಳಲಾಗಿದ್ದು, ಸದರಿ ರೇಡಿಯೋ ಕೇಂದ್ರಗಳ ಮೂಲಕ 1 ತಿಂಗಳ ಕಾಲ ನೀರು ಮತ್ತು ನೈರ್ಮಲ್ಯ ವಿಷಯಗಳ ಕುರಿತು ಹಮ್ಮಿಕೊಳ್ಳುವ ಕಾರ್ಯಕ್ರಮಗಳ ಕುರಿತು ಜ಼ೂಮ್ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾನ್ಯ ಆಯುಕ್ತರು ವಿಚಾರ ವಿನಿಮಯ ನಡೆಸಿದರು.

**ನೀರು – ನೈರ್ಮಲ್ಯ ಕುರಿತ ಸಮಸ್ಯೆಗಳಿಗೆ**
**ಪರಿಹಾರ ಸಹಾಯವಾಣಿ 94809 85555 ಗೆ ಕರೆ ಮಾಡಿ.**